# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : 1(121) |
| **ಸದಸ್ಯರ ಹೆಸರು** | : ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| **ಉತ್ತರಿಸುವ ದಿನಾಂಕ** | : 19.12.2022 |
| **ಉತ್ತರಿಸುವ ಸಚಿವರು** | : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಹಾಗೂ ಸಕಾಲ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಖಾಯಂ ಶಿಕ್ಷಕರ ಸಂಖ್ಯೆ ಎಷ್ಟು ಹಾಗೂ ವಿಷಯವಾರು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; | • ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಯಂ ಶಿಕ್ಷಕರ ಸಂಖ್ಯೆ- 142967<br>• ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರತ ಖಾಯಂ ಶಿಕ್ಷಕರ ಸಂಖ್ಯೆ- 34898<br>• ವಿಷಯವಾರು ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಖಾಲಿ ಹುದ್ದೆಗಳ ಅಂಕಿ ಅಂಶಗಳನ್ನೊಳಗೊಂಡ ವಿವರ ಅನುಬಂಧ-1 ರಲ್ಲಿ ಒದಗಿಸಲಾಗಿದೆ. |
| ಆ) | ಅತಿಥಿ ಶಿಕ್ಷಕರಾಗಿ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಅನುಸರಿಸುವ ಮಾನದಂಡಗಳೇನು; ಅತಿಥಿ ಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿರುವ ಶಿಕ್ಷಕರ ಸಂಖ್ಯೆ ಎಷ್ಟು; ಅವರಿಗೆ ಸೇವಾ ರಕ್ಷಣೆ ಒದಗಿಸಲಾಗುತ್ತಿದೆಯೇ; | ಅತಿಥಿ ಶಿಕ್ಷಕರಾಗಿ ನೇಮಕಾತಿ ಮಾಡಿಕೊಳ್ಳುವ ಸಂದರ್ಭದಲ್ಲಿ ಅನುಸರಿಸುವ ಮಾನದಂಡಗಳು ಈ ಕೆಳಕಂಡಂತಿದೆ :-<br>**1)** 1 ರಿಂದ 10ನೇ ತರಗತಿಗಳಿಗೆ ಮಾತ್ರ ಶಾಲಾವಾರು ತಾಲ್ಲೂಕುವಾರು ಖಾಲಿ ಇರುವ ಅಗತ್ಯ ಹುದ್ದೆಗಳಿಗೆ ಮಾತ್ರ ಅತಿಥಿ ಶಿಕ್ಷಕರನ್ನು ತ್ವರಿತವಾಗಿ ನೇಮಕಾತಿ ಮಾಡಲು ಆದ್ಯತೆ ಮೇರೆಗೆ ಅಗತ್ಯ ಕ್ರಮವಹಿಸುವುದು.<br>**2)** ಜಿಲ್ಲಾ ಉಪನಿರ್ದೇಶಕರುಗಳು ಪ್ರಾಥಮಿಕ/ಪ್ರೌಢ ಶಾಲೆಗಳಲ್ಲಿ ವಿದ್ಯಾರ್ಥಿಗಳ ದಾಖಲಾತಿಯಿಂದಾಗಿ ವಿದ್ಯಾರ್ಥಿಗಳ ಶಿಕ್ಷಕರ ಅನುಪಾತವನ್ನು ಗಮನಿಸಿಅತಿಥಿ ಶಿಕ್ಷಕರನ್ನು ಹಂಚಿಕೆ ಮಾಡುವುದು.<br>**3)** ಅತಿಥಿ ಶಿಕ್ಷಕರ ಆಯ್ಕೆ ಜವಾಬ್ದಾರಿಯನ್ನು ಸಂಬಂಧಿಸಿದ ಸರ್ಕಾರಿ ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರುಗಳ (1 ರಿಂದ 8ನೇ ತರಗತಿಗಳಿಗೆ.ಮಾತ್ರ)ಹಾಗೂ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳ (9 ರಿಂದ 10ನೇ ತರಗತಿಗಳಿಗೆ ಮಾತ್ರ) ಮೂಲಕವೇ ನೇಮಕ ಮಾಡುವುದು. |

<table>
<tr><td></td><td></td><td>
4) ಅತಿಥಿ ಶಿಕ್ಷಕರನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಅತ್ಯಾವಶ್ಯಕ ಖಾಲಿ ಹುದ್ದೆಗಳಿಗೆ ಆದ್ಯತೆ ಮೇರೆಗೆ ನೇಮಿಸುವುದು.
5) ಅತಿಥಿ ಶಿಕ್ಷಕರನ್ನು ಆಯಾ ಹುದ್ದೆಗೆ ನಿಗದಿಪಡಿಸಿದ ಕನಿಷ್ಠ ವಿದ್ಯಾರ್ಹತೆಯನ್ನು ಪರಿಗಣಿಸಿ ಮೆರಿಟ್ ಆಧಾರದಲ್ಲಿ ಆಯ್ಕೆ ಮಾಡತಕ್ಕದ್ದು.
6) ಅತಿಥಿ ಶಿಕ್ಷಕರ ಹಾಜರಾತಿ ವಹಿಯನ್ನು ಪ್ರತ್ಯೇಕವಾಗಿ ನಿರ್ವಹಿಸುವುದು.
7) ಸರ್ಕಾರಿ ಪ್ರಾಥಮಿಕ ಶಾಲಾ ಅತಿಥಿ ಶಿಕ್ಷಕರ ಗೌರವ ಸಂಭಾವನೆ ದರ ಮಾಹೆಯಾನ ರೂ.10000/-ಆಗಿರುತ್ತದೆ ಹಾಗೂ ಪ್ರೌಢಶಾಲಾ ಶಿಕ್ಷಕರ ಗೌರವ ಸಂಭಾವನೆ ದರ ಮಾಹೆಯಾನ ರೂ.10500/-ಆಗಿರುತ್ತದೆ.
<ul>
<li>ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಂಖ್ಯೆ - 27000.</li>
<li>ಸರ್ಕಾರಿ ಪ್ರೌಢಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರ ಸಂಖ್ಯೆ- 5159.</li>
<li>ಅತಿಥಿ ಶಿಕ್ಷಕರಿಗೆ ಸೇವಾ ರಕ್ಷಣೆ ಒದಗಿಸಲು ಕೆ.ಸಿ.ಎಸ್ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.</li>
</ul>
</td></tr>
<tr><td>ಇ)</td><td>ಖಾಯಂ ಶಿಕ್ಷಕರನ್ನು ನೇಮಕ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯೊಳಗೆ ನೇಮಕ ಮಾಡಲಾಗುವುದು;</td><td>
ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8ನೇ ತರಗತಿಗಳು) ಒಟ್ಟು 15000 ಶಿಕ್ಷಕರ ನೇಮಕಾತಿ ಮಾಡಿಕೊಳ್ಳುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಸರ್ಕಾರಿ ಪ್ರೌಢಶಾಲೆಗಳಲ್ಲಿ ಈ ಕೆಳಕಂಡಂತೆ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.
<table>
<tr><th>ಕ್ರ.ಸಂ</th><th>ಪದನಾಮ</th><th>ಭರ್ತಿಮಾಡಲು ಸಹಮತಿಸಿದ ಹುದ್ದೆಗಳು</th></tr>
<tr><td>1</td><td>ಸಹ ಶಿಕ್ಷಕರು</td><td>2200</td></tr>
<tr><td>2</td><td>ದೈಹಿಕ ಶಿಕ್ಷಕರು</td><td>200</td></tr>
<tr><td>3</td><td>ವಿಶೇಷ ಶಿಕ್ಷಕರು</td><td>100</td></tr>
<tr><td>4</td><td>ಒಟ್ಟು ಹುದ್ದೆಗಳು</td><td>2500</td></tr>
</table>
</td></tr>
</table>

| | | |
|---|---|---|
| | | ನೇಮಕಾತಿ ಪ್ರಕ್ರಿಯೆಯನ್ನು ಶೀಘ್ರದಲ್ಲಿಯೇ ಪ್ರಾರಂಭಿಸಲಾಗುವುದು. |
| ಈ) | ಖಾಯಂ ವಿಶೇಷ ಶಿಕ್ಷಕರ (ಸಂಗೀತ, ಚಿತ್ರಕಲೆ, ದೈಹಿಕ ಶಿಕ್ಷಕರು) ಸಂಖ್ಯೆ ಹಾಗೂ ಅತಿಥಿ ಶಿಕ್ಷಕರ ಸಂಖ್ಯೆ ಎಷ್ಟು? (ವಿವರ ನೀಡುವುದು) | • **ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿನ ವಿಶೇಷ ಶಿಕ್ಷಕರ ಸಂಖ್ಯೆ**<br>1) ಸಂಗೀತ ಶಿಕ್ಷಕರ ಸಂಖ್ಯೆ: 83<br>2) ಚಿತ್ರಕಲೆ ಶಿಕ್ಷಕರ ಸಂಖ್ಯೆ: 123<br>3) ದೈಹಿಕ ಶಿಕ್ಷಕರ ಸಂಖ್ಯೆ: 4441<br>4) ಕಾರ್ಯನಿರತ ಅತಿಥಿ ಶಿಕ್ಷಕರ ಸಂಖ್ಯೆ:27000<br><br>• **ಸರ್ಕಾರಿ ಪ್ರೌಢಶಾಲೆಗಳಲ್ಲಿನ**<br>1) ಸಂಗೀತ, ಚಿತ್ರಕಲೆ ಶಿಕ್ಷಕರು ಸೇರಿ ವಿಶೇಷ ಶಿಕ್ಷಕರ ಸಂಖ್ಯೆ: 2326<br>2) ದೈಹಿಕ ಶಿಕ್ಷಕರ ಸಂಖ್ಯೆ: 3762<br>3) ಕಾರ್ಯನಿರತ ಅತಿಥಿ ಶಿಕ್ಷಕರ ಸಂಖ್ಯೆ:5159<br>4) ದೈಹಿಕ ಶಿಕ್ಷಕರ ಮತ್ತು ವಿಶೇಷ ಶಿಕ್ಷಕರ ಖಾಲಿ ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಿಕೊಳ್ಳಲು ಅವಕಾಶವಿರುವುದಿಲ್ಲ. |

ಇಪಿ 606 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ
ಹಾಗೂ ಸಕಾಲ ಸಚಿವರು